ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಭವನಗಳ ನಿರ್ಮಾಣ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

21 (173) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ನಿರ್ಮಿಸಿರುವ ಅಂಬೇಡ್ಕರ್ ಭವನ, ಜಗಜೀವನರಾಂ ಭವನ, ಮತ್ತು ವಾಲ್ಮೀಕಿ ಭವನಗಳ ಸಂಖ್ಯೆ ಎಷ್ಟು; ಎಷ್ಟು ಭವನಗಳು ಅಪೂರ್ಣವಾಗಿವೆ; ಈ ಭವನಗಳನ್ನು ನಿರ್ವಹಣೆ ಮಾಡುವವರು ಯಾರು;

(ಆ) ಈ ಭವನಗಳ ನಿರ್ಮಾಣಕ್ಕೆ ಬೇಕಾದ ಅನುದಾನವನ್ನು ಒದಗಿಸುವುದಾಗಿ ಮಾನ್ಯ ಮಂತ್ರಿಗಳು ಈ ಹಿಂದೆ ಭರವಸೆ ನೀಡಿದ್ದರೂ ಭವನಗಳು ಪೂರ್ಣವಾಗಿ ನಿರ್ಮಾಣವಾಗದಿರಲು ಕಾರಣವೇನು;

(ಇ) ಎಸ್. ಸಿ. ಪಿ. ಮತ್ತು ಟಿ. ಎಸ್. ಪಿ ಯೋಜನೆಯ ಹಣವನ್ನು ಒದಗಿಸಿ ಈ ಭವನಗಳ ನಿರ್ಮಾಣ ಮತ್ತು ನಿರ್ವಹಣೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು;

(ಈ) ಈ ಜಿಲ್ಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಭವನಗಳನ್ನು ಆದಷ್ಟು ಬೇಗ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು?